# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110

ದೂ. : 080–29566001, 080–27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


ಸಂ. ಬಿಐಎಎಪಿಎ/ಟಿಪಿ/ಸಿಸಿ/289/2025–26/1625 ದಿನಾಂಕ: 2 SEP 2025

## "ಪರಿಷ್ಕೃತ ಪ್ರಾರಂಭಿಕ ಪ್ರಮಾಣ ಪತ್ರ"

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 15(1) ರನ್ವಯ)
(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳ 1965 ರ ನಿಯಮ 30 ನಮೂನೆ 3 ರನ್ವಯ)

ವಿಷಯ: ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಉದಯಗಿರಿ ಗ್ರಾಮದ ಸ.ನಂ 39/2 ರ ಪೈಕಿ 1ಎ–02ಗು, ಸ.ನಂ 41/1 ರ ಪೈಕಿ 1ಎ–38ಗು, ಸ.ನಂ 43 ರ ಪೈಕಿ 2ಎ–26ಗು, ಸ.ನಂ 44 ರ ಪೈಕಿ 3ಎ–00ಗು ಮತ್ತು ಸ.ನಂ 75/1 ರ ಪೈಕಿ 1ಎ–27ಗು ಒಟ್ಟು 10ಎಕರೆ 13ಗುಂಟೆ ಅಥವಾ 41783.21 ಚ.ಮೀ ವಿಸ್ತೀರ್ಣ ಪ್ರದೇಶದ ಪೈಕಿ KSSIDC ವತಿಯಿಂದ ಮೇಲ್ಸೇತುವೆ (Flyover) ನಿರ್ಮಾಣ ಮಾಡಲು ಪ್ರಸ್ತಾಪಿಸಿರುವ 1315.12 ಚ.ಮೀ ಪ್ರದೇಶವನ್ನು ಹೊರತುಪಡಿಸಿ, ಉಳಿಕೆ 10ಎ–0.04ಗು ಅಥವಾ 40468.09 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಅನುಮೋದಿತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಖಾತಾ ಸಂಖ್ಯೆ: 60/39/2/44/75/1/43/41/1 (ಪಿಐಡಿ ನಂ. 150300201900520043) ರಲ್ಲಿ 40468.09 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ **ಬ್ಲಾಕ್** ಎ – ವಿಂಗ್ 01 & 02 ರಲ್ಲಿ ವಸತಿ ಉಪಯೋಗದ Stilt + G + 10 UF, **ಬ್ಲಾಕ್** ಬಿ – ವಿಂಗ್ 03 ರಲ್ಲಿ ವಸತಿ ಉಪಯೋಗದ G + 10 UF, **ಬ್ಲಾಕ್** ಸಿ – ವಿಂಗ್ 04, 05 & 06 ರಲ್ಲಿ ವಸತಿ ಉಪಯೋಗದ Stilt + G + 10 UF, **ಬ್ಲಾಕ್** ಡಿ – ವಿಂಗ್ 07, 08, 09, 10 & 11 ರಲ್ಲಿ ವಸತಿ ಉಪಯೋಗದ Stilt + G + 10 UF & **ಬ್ಲಾಕ್** ಇ – ವಿಂಗ್ 12 ರಲ್ಲಿ ವಸತಿ ಉಪಯೋಗದ Stilt + G + 10 UF ಹಾಗೂ ಕ್ಲಬ್‌ಹೌಸ್ ಉಪಯೋಗದ G + 02 UF ಗಳನ್ನು ಒಳಗೊಂಡಂತೆ ಒಟ್ಟಾರೆ 1555 ವಸತಿ ಘಟಕಗಳ ಕಟ್ಟಡಗಳನ್ನು ನಿರ್ಮಿಸಲು ಪರಿಷ್ಕೃತ ಕಟ್ಟಡ ನಕ್ಷೆಗಳಿಗೆ ಅನುಮೋದನೆ ನೀಡಿ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿರುವ ಬಗ್ಗೆ.

ಉಲ್ಲೇಖ:
1) ಈ ಪ್ರಾಧಿಕಾರದಿಂದ ಅಭಿವೃದ್ಧಿ ನಕ್ಷೆಗೆ ಅನುಮೋದನೆ ನೀಡಿದ ಆದೇಶ ಪತ್ರ ಸಂಖ್ಯೆ: ಬಿಐಎಎಪಿಎ/ಟಿಪಿ1/ಡಿಪಿ/44/2017–18/1825, ದಿನಾಂಕ: 25/03/2021.
2) ಈ ಪ್ರಾಧಿಕಾರದ ಪ್ರಾರಂಭಿಕ ಪ್ರಮಾಣ ಪತ್ರ ಸಂಖ್ಯೆ: ಬಿಐಎಎಪಿಎ/ಟಿಪಿ/ಸಿಸಿ/ 05/2021–22/577, ದಿನಾಂಕ: 05/08/2021.
3) ಈ ಪ್ರಾಧಿಕಾರದಿಂದ ಪರಿಷ್ಕೃತ ಅಭಿವೃದ್ಧಿ ನಕ್ಷೆಗೆ ಅನುಮೋದನೆ ನೀಡಿದ ಆದೇಶ ಪತ್ರ ಸಂಖ್ಯೆ: ಬಿಐಎಎಪಿಎ/ಟಿಪಿ02/ಎಲ್‌ಎಒ/ಡಿಪಿ/15/2015–16/24–25 ದಿನಾಂಕ: 24/07/2025.
4) ಅರ್ಜಿದಾರರು ಪರಿಷ್ಕೃತ ಕಟ್ಟಡ ನಕ್ಷೆಗೆ ಅನುಮೋದನೆ ನೀಡಲು ಕೋರಿ ಸಲ್ಲಿಸಿರುವ ಅರ್ಜಿ ದಿನಾಂಕ: 28/07/2025.
5) ಕಟ್ಟಡ ನಕ್ಷೆಗೆ ಅನುಮೋದನೆ ನೀಡಿ, ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿರುವ ಪ್ರಸ್ತಾವನೆಗೆ ಸಂಬಂಧಿಸಿದಂತೆ ಪೂರ್ವ ಸಮ್ಮತಿಗಾಗಿ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರಿಗೆ ಕಡತ ಸಲ್ಲಿಸಿದ ದಿನಾಂಕ: 12/08/2025.
6) ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಸಮ್ಮತಿ ನೀಡಿದ ದಿನಾಂಕ: 25/08/2025
7) ಈ ಕಛೇರಿ ಸಮ ಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: 29/08/2025.
8) ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ 0014961 ರ ದಿನಾಂಕ: 02/09/2025 ರಂತೆ ರೂ. 40,470/- (ನಲವತ್ತು ಸಾವಿರದ ನಾಲ್ಕು ನೂರ ಎಪ್ಪತ್ತು ರೂಪಾಯಿಗಳು ಮಾತ್ರ) ರಂತೆ ಪಾವತಿಸಿರುತ್ತಾರೆ.

******************

ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಉದಯಗಿರಿ ಗ್ರಾಮದ ಸ.ನಂ 39/2 ರ ಪೈಕಿ 1ಎ–02ಗು, ಸ.ನಂ 41/1 ರ ಪೈಕಿ 1ಎ–38ಗು, ಸ.ನಂ 43 ರ ಪೈಕಿ 2ಎ–26ಗು, ಸ.ನಂ 44 ರ ಪೈಕಿ 3ಎ ಮತ್ತು ಸ.ನಂ 75/1 ರ ಪೈಕಿ 1ಎ–27ಗು ಒಟ್ಟು 10ಎಕರೆ 13ಗುಂಟೆ ಅಥವಾ 41783.21 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಉಲ್ಲೇಖ (1) ರಂತೆ ಪ್ರಾಧಿಕಾರದಿಂದ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲಾಗಿತ್ತು.

ಉಲ್ಲೇಖ (2) ರಂತೆ ಅನುಮೋದಿತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಅಣ್ಣೇಶ್ವರ ಗ್ರಾಮ ಪಂಚಾಯಿತಿಯ ಖಾತಾ ಸಂಖ್ಯೆ : 60/39/2/44/75/1/43/41/1 (150300201900520043) ರಲ್ಲಿ 31142.75 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ "ವಸತಿ ಸಮುಚ್ಛಾಯ" ಉಪಯೋಗ ಕಟ್ಟಡಗಳನ್ನು ಕಟ್ಟಲು ಯೋಜನಾ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗಿತ್ತು.

ನಂತರ ಅರ್ಜಿದಾರರಾದ ಮೆ॥ ಟ್ರಿನಾಯನಿ ರಿಯಾಲ್ಟರ್ಸ್ ಪ್ರೈವೇಟ್ ಲಿಮಿಟೆಡ್ ಪರವಾಗಿ ಅಧಿಕೃತ ಸಹಿದಾರರಾದ ಶ್ರೀ ಪಿ.ಕೆ.ಮಿಶ್ರ ರವರು ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಉದಯಗಿರಿ ಗ್ರಾಮದ ಸ.ನಂ 39/2 ರ ಪೈಕಿ 1ಎ–02ಗು, ಸ.ನಂ 41/1 ರ ಪೈಕಿ 1ಎ–38ಗು, ಸ.ನಂ 43 ರ ಪೈಕಿ 2ಎ–26ಗು, ಸ.ನಂ 44 ರ ಪೈಕಿ 3ಎ–00ಗು ಮತ್ತು ಸ.ನಂ 75/1 ರ ಪೈಕಿ 1ಎ–27ಗು ಒಟ್ಟು 10ಎಕರೆ 13ಗುಂಟೆ ಅಥವಾ 41783.21 ಚ.ಮೀ ವಿಸ್ತೀರ್ಣ ಪ್ರದೇಶದ ಪೈಕಿ KSSIDC ವತಿಯಿಂದ ಮೇಲ್ಸೇತುವೆ (Flyover) ನಿರ್ಮಾಣ ಮಾಡಲು ಪ್ರಸ್ತಾಪಿಸಿರುವ 1315.12 ಚ.ಮೀ ಪ್ರದೇಶವನ್ನು ಹೊರತುಪಡಿಸಿ, ಉಳಿಕೆ 10ಎ–0.04ಗು ಅಥವಾ 40468.09 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಪರಿಷ್ಕೃತ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲು ಕೋರಿರುವ ಹಿನ್ನಲೆಯಲ್ಲಿ ಉಲ್ಲೇಖ (3) ರಂತೆ ವಸತಿ ಉಪಯೋಗದ ಪರಿಷ್ಕೃತ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಲಾಗಿತ್ತು.

ಪ್ರಸ್ತುತ ಅರ್ಜಿದಾರರು ಉಲ್ಲೇಖ (4) ರಂತೆ ಮನವಿ ಸಲ್ಲಿಸಿ ಅನುಮೋದಿತ ವಸತಿ ಉಪಯೋಗದ ಪರಿಷ್ಕೃತ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಖಾತಾ ಸಂಖ್ಯೆ: 60/39/2/44/75/1/43/41/1 (ಪಿಐಡಿ ನಂ. 150300201900520043) ರಲ್ಲಿ 40468.09 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ **ಬ್ಲಾಕ್ ಎ** – ವಿಂಗ್ 01 & 02 ರಲ್ಲಿ ವಸತಿ ಉಪಯೋಗದ Stilt + G + 10 UF, **ಬ್ಲಾಕ್ ಬಿ** – ವಿಂಗ್ 03 ರಲ್ಲಿ ವಸತಿ ಉಪಯೋಗದ G + 10 UF, **ಬ್ಲಾಕ್ ಸಿ** – ವಿಂಗ್ 04, 05 & 06 ರಲ್ಲಿ ವಸತಿ ಉಪಯೋಗದ Stilt + G + 10 UF, **ಬ್ಲಾಕ್ ಡಿ** – ವಿಂಗ್ 07, 08, 09, 10 & 11 ರಲ್ಲಿ ವಸತಿ ಉಪಯೋಗದ Stilt + G + 10 UF & **ಬ್ಲಾಕ್ ಇ** – ವಿಂಗ್ 12 ರಲ್ಲಿ ವಸತಿ ಉಪಯೋಗದ Stilt + G + 10 UF ಹಾಗೂ ಕ್ಲಬ್‌ಹೌಸ್ ಉಪಯೋಗದ G + 02 UF ಗಳನ್ನು ಒಳಗೊಂಡಂತೆ ಒಟ್ಟಾರೆ 1555 ವಸತಿ ಘಟಕಗಳ ಕಟ್ಟಡಗಳನ್ನು ನಿರ್ಮಿಸುವ ಸಂಬಂಧ ಪ್ರಾಧಿಕಾರದಿಂದ ಪರಿಷ್ಕೃತ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ.

ಸರ್ಕಾರದ ಅಧಿಸೂಚನೆ ಸಂಖ್ಯೆ : ಯುಡಿಡಿ234ಬಿಎಂಆರ್2023, ದಿನಾಂಕ: 20/11/2023 ರಂತೆ ಅನುಮೋದನೆಯಾದ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ನಿಯಮಗಳು 2020 ರಲ್ಲಿನ ನಿಯಮ 18 (5) ರನ್ವಯ ಮತ್ತು ದಿನಾಂಕ: 27/12/2023 & 03/02/2024 ರಂದು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಅಧಿಕೃತ ಜ್ಞಾಪನಾ ಪತ್ರದಲ್ಲಿ ಸೂಚಿಸಿರುವಂತೆ ಸದರಿ ಪರಿಷ್ಕೃತ ಕಟ್ಟಡ ನಕ್ಷೆಗೆ ಅನುಮೋದನೆ ನೀಡಿ, ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಂಬಂಧ ಉಲ್ಲೇಖ (5) ರಂತೆ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರನ್ನು ಪೂರ್ವ ಸಮ್ಮತಿಯನ್ನು ಕೋರಲಾಗಿದ್ದು, ಉಲ್ಲೇಖ (6) ರಂತೆ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಹಲವು ಷರತ್ತುಗಳಿಗೆ ಒಳಪಟ್ಟು ಕಟ್ಟಡ ನಕ್ಷೆಗೆ ಅನುಮೋದನೆ ನೀಡಿ, ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಸಮ್ಮತಿ ನೀಡಿರುತ್ತಾರೆ.

ಉಲ್ಲೇಖ (7) ರಲ್ಲಿನ ಈ ಕಛೇರಿ ಪತ್ರದಲ್ಲಿ ಅಗತ್ಯ ಶುಲ್ಕಗಳನ್ನು ಪಾವತಿಸಲು ಹಾಗೂ ಅಗತ್ಯ ದಾಖಲೆಗಳೊಂದಿಗೆ ವಲಯ ನಿಯಮಾವಳಿಗೆ ಅನುಗುಣವಾಗಿ ಪರಿಷ್ಕೃತ ಕಟ್ಟಡ ನಕ್ಷೆಯನ್ನು ಅಳತೆಗೆ ತಯಾರಿಸಿ, ನಡುಜಾಗೆಗಳನ್ನು ನಿಯಮಾನುಸಾರ ಕಾಯ್ದಿರಿಸಿ, ಅರ್ಜಿದಾರರ ಹಾಗೂ ಅಭಿಯಂತರರ ಸಹಿಯೊಂದಿಗೆ ಕಟ್ಟಡ ನಕ್ಷೆಯ ಮೂಲ ಪ್ರತಿ ಹಾಗೂ ನೀಲಿ ನಕ್ಷೆಯ ಪ್ರತಿಯನ್ನು ಸಲ್ಲಿಸಲು ಸೂಚಿಸಲಾಗಿತ್ತು.

ಉಲ್ಲೇಖ (8) ರಲ್ಲಿ ಅರ್ಜಿದಾರರು ನಿಗಧಿತ ಶುಲ್ಕಗಳನ್ನು ಪ್ರಾಧಿಕಾರಕ್ಕೆ ಪಾವತಿಸಿ, ಅಗತ್ಯ ದಾಖಲೆಗಳೊಂದಿಗೆ ಉದ್ದೇಶಿತ ಕಟ್ಟಡಗಳ ಪರಿಷ್ಕೃತ ಕಟ್ಟಡ ನಕ್ಷೆಯ ನೀಲಿ ಪ್ರತಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಆದ್ದರಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಗಿನ ನಿಬಂಧನೆಗಳೊಂದಿಗೆ ನೀಡಲಾಗಿದೆ.

**ನಿಬಂಧನೆಗಳು**

1. ಈ ಪ್ರಾಧಿಕಾರದ ಪರಿಷ್ಕೃತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಪತ್ರ ಸಂಖ್ಯೆ: ಬಿಐಎಎಪಿಎ/ಟಿಪಿ02/ಎಲ್‌ಎಒ/ಡಿಪಿ/15/2015-16/24-25 ದಿನಾಂಕ: 24/07/2025 ರ ಆದೇಶದಲ್ಲಿನ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.

2. ಯೋಜಿಸಿರುವ ಪರಿಷ್ಕೃತ ಕಟ್ಟಡವನ್ನು ವಸತಿ ಉದ್ದೇಶಕ್ಕಾಗಿಯೇ ಉಪಯೋಗಿಸಬೇಕು.

3. ಈ ಪ್ರಾರಂಭಿಕ ಪ್ರಮಾಣ ಪತ್ರವನ್ನು ಎರಡು ವರ್ಷದ ಅವಧಿಗೆ ಅಂದರೆ **ದಿನಾಂಕ: 02/09/2025** ರಿಂದ **01/09/2027** ರವರೆಗೆ ಮಾತ್ರ ನೀಡಲಾಗಿರುತ್ತದೆ.

4. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕಾರ ಇದು ಪ್ರಾರಂಭಿಕ ಪ್ರಮಾಣ ಪತ್ರವಾಗಿದ್ದು, ಈ ಪತ್ರದ ಅಧಾರದ ಮೇಲೆ ಅವಶ್ಯಕ ಇತರೆ ಪರವಾನಿಗೆಯನ್ನು ಅಣ್ಣೇಶ್ವರ ಗ್ರಾಮ ಪಂಚಾಯ್ತಿರವರಿಂದ ಪಡೆಯದೇ ಅಭಿವೃದ್ಧಿ ಕಾರ್ಯ ಕೈಗೊಳ್ಳಬಾರದು.

5. ವಸತಿ ಉಪಯೋಗದ ಪರಿಷ್ಕೃತ ಕಟ್ಟಡವನ್ನು ನಿರ್ಮಿಸಲು ಪರವಾನಿಗೆಯನ್ನು ಅಣ್ಣೇಶ್ವರ ಗ್ರಾಮ ಪಂಚಾಯ್ತಿಯಿಂದ ಪಡೆಯಬೇಕು.

6. ವಸತಿ ಉಪಯೋಗದ ಪರಿಷ್ಕೃತ ಕಟ್ಟಡವನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ನಿರ್ಮಿಸಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ನಕ್ಷೆಯಂತೆಯೇ ಕೈಗೊಳ್ಳಬೇಕು. ಬೆಳವಣಿಗೆಯಲ್ಲಿನ ಯಾವುದೇ ಬದಲಾವಣೆಯನ್ನು ಈ ಕಛೇರಿಯ ಪೂರ್ವಾನುಮತಿ ಪಡೆಯದೇ ಮಾಡತಕ್ಕದ್ದಲ್ಲ.

7. ವಸತಿ ಉಪಯೋಗದ ಪರಿಷ್ಕೃತ ಕಟ್ಟಡ ನಿರ್ಮಿಸಲು ನಕ್ಷೆಯಲ್ಲಿ ಬಿಟ್ಟಿರುವಂತೆ ನಡುಜಾಗವನ್ನು ಬಿಟ್ಟು ಕಟ್ಟಡ ನಿರ್ಮಿಸತಕ್ಕದ್ದು.

8. ವಸತಿ ಉಪಯೋಗದ ಪರಿಷ್ಕೃತ ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.

9. ವಸತಿ ಉಪಯೋಗದ ಪರಿಷ್ಕೃತ ಕಟ್ಟಡದ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ Structural Details ಪಡೆದು ಅದರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.

10. ಸದರಿ ಜಮೀನುಗಳ ಮಧ್ಯೆ ಸರ್ವೆನಕ್ಷೆ ಮತ್ತು ಗ್ರಾಮ ನಕ್ಷೆಯಂತೆ ಸ.ನಂ 75/1, 44 ಮತ್ತು 43 ರಲ್ಲಿ ಕಾಲುವೆ ಹಾದು ಹೋಗುತ್ತಿದ್ದು, ಸದರಿ ಕಾಲುವೆಗೆ ಸ.ನಂ 75/1 ರಲ್ಲಿ ಒಂದು ಕಲ್ವರ್ಟ್, ಸ.ನಂ 75/1 & 44 ರ ಗಡಿಯಲ್ಲಿ ಒಂದು ಕಲ್ವರ್ಟ್ ಮತ್ತು ಸ.ನಂ 43 ರಲ್ಲಿ ಒಂದು ಕಲ್ವರ್ಟ್ ಸೇರಿದಂತೆ ಒಟ್ಟಾರೆ 03 ಸಂಖ್ಯೆಯ ಕಲ್ವರ್ಟ್‌ಗಳನ್ನು ನಿರ್ಮಾಣ ಮಾಡುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪತ್ರ ಪಡೆದು ಸದರಿ ಅನುಮತಿ ಪತ್ರದಲ್ಲಿ ವಿಧಿಸುವ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.

11. ಪ್ರಸ್ತಾವನೆ ಸಂಬಂಧ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾರವರ ಪತ್ರ ಸಂಖ್ಯೆ: ಬಿಐಎಎಲ್/ಸೌತ್/ಬಿ/062722/680287 ದಿನಾಂಕ: 28/07/2022 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

12. ಪ್ರಸ್ತಾವನೆ ಸಂಬಂಧ ಅಗ್ನಿ ಶಾಮಕ ಇಲಾಖೆ ರವರ ಕಛೇರಿ ಪತ್ರ ಸಂಖ್ಯೆ : (KSFES/GBC(1)/152, Docket No. KSFES/NOC/265/2024 Dated: 21/12/2024) ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

13. ಪ್ರಸ್ತಾವನೆ ಸಂಬಂಧ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿ ರವರ ಪತ್ರ ಸಂಖ್ಯೆ: Consent Order No. CTE-323704 PCB ID: 98613 Date: 09/02/2021) ರಂದು ನೀಡಿರುವ ನಿರಾಕ್ಷೇಪಣಾ ಪತ್ರವನ್ನು ಪಡೆದು ಸಲ್ಲಿಸಿದ್ದು, ಪರಿಷ್ಕೃತ ನಿರಾಕ್ಷೇಪಣಾ ಪತ್ರವನ್ನು ಪಡೆದುಕೊಂಡು ಸದರಿ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

14. ಪ್ರಸ್ತಾವನೆ ಸಂಬಂಧ State Level Environment Impact Assessment Authority-Karanataka ರವರ ಪತ್ರ ಸಂಖ್ಯೆ : SEIAA115CON2024, ದಿನಾಂಕ: 10/02/2025 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

15. ಪ್ರಸ್ತಾವನೆ ಸಂಬಂಧ ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ ರವರ ಪತ್ರ ಸಂಖ್ಯೆ : DGM(CM) BGTD/NOC for High rise/ 2019-20/37 Dated @ Bangalore, Dated 11/07/2019) ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

16. ಬೆಂಗಳೂರು ವಿದ್ಯುತ್ ಸರಬರಾಜು ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಮುಇಂ/ಬೆಂಗ್ರಾಕ್ಷೇವ/ ಅಇಂ(ವಿ)/ಸಕಾಇಂ-2/19-20/7771-76, ದಿನಾಂಕ: 23/01/2020 ಅನ್ನು ಪಡೆದು ಸಲ್ಲಿಸಿರುತ್ತಾರೆ. ಸದರಿ ನಿರಾಕ್ಷೇಪಣಾ ಪತ್ರದ ಅವಧಿಯು ಮುಕ್ತಾಯಗೊಂಡಿದ್ದು, ನವೀಕರಣ ಪಡೆದು ಸದರಿ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

17. ಯಲಹಂಕ ಏರ್‌ಫೋರ್ಸ್ ರವರ ಪತ್ರ ಸಂಖ್ಯೆ: ಟಿಸಿ/4906/2ಎಟಿಎಸ್ (ಟಿವೈ ಬಿಎಂ-ಡಿಸಿಸಿಸಿಎಕ್ಸ್‌ಎಕ್ಸ್‌ಎಕ್ಸ್‌ವಿಐ), ದಿನಾಂಕ: 29/11/2022 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

18. ರೈಲ್ವೆ ಇಲಾಖೆ ರವರ ಪತ್ರ ಸಂಖ್ಯೆ: B/W-278/NOC/ M/s Trinayani Realtors Pvt. Ltd/23, Dated: 15/03/2021 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

19. ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ-2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.

20. ಪ್ರಶ್ನಿತ ಜಮೀನುಗಳಲ್ಲಿ ಉಪಖನಿಜಗಳಾದ ಮುರ್ರಂ ಮತ್ತು ಕಟ್ಟಡ ಕಲ್ಲುಗಳ ಕಾನೂನು ಬದ್ಧ ವಿಲೇವಾರಿಗೆ ಲಭ್ಯತೆ ಕಂಡುಬಂದಲ್ಲಿ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ 1944 ರ ತಿದ್ದುಪಡಿ 2023

**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**

**ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110**

**ದೂ. : 080–29566001, 080–27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in**

ನಿಯಮ 3–ಎ ಅನ್ವಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಪೂರ್ವಾನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.

21. ಕಾಮಗಾರಿಗಳಿಂದಾಗಿ ಪರಿಸರವು ಮಾಲಿನ್ಯವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಮತ್ತು ಸ್ವಾಭಾವಿಕ ಮಳೆಯ ನೀರು ಇಂಗಿ ಹೋಗಲು ವ್ಯವಸ್ಥೆ (Rain Water harvesting) ಯನ್ನು ಮಾಡತಕ್ಕದ್ದು ಮತ್ತು ಸೌರಶಕ್ತಿ ವ್ಯವಸ್ಥೆಯನ್ನು ಕಟ್ಟಡದಲ್ಲಿ ಒದಗಿಸತಕ್ಕದ್ದು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ನಿವೇಶನದ ಮುಂಭಾಗದಲ್ಲಿ ಗಿಡ/ಮರವನ್ನು ಬೆಳೆಸತಕ್ಕದ್ದು.

22. ಈ ಪ್ರಮಾಣ ಪತ್ರ ನೀಡಿರುವ ಮಾತ್ರಕ್ಕೆ ಯಾವುದೇ ಸೌಲಭ್ಯವನ್ನು ಅರ್ಜಿದಾರರಿಗೆ ನೀಡುವ ಹೊಣೆಗಾರಿಕೆ ಪ್ರಾಧಿಕಾರಕ್ಕಿರುವುದಿಲ್ಲ.

23. ಈ ಪ್ರಾರಂಭಿಕ ಪ್ರಮಾಣ ಪತ್ರದೊಡನೆ ಅನುಮೋದಿಸಲ್ಪಟ್ಟಿರುವ ನಕ್ಷೆಯು ಕಟ್ಟಡದ ನಿರ್ಮಾಣ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.

24. ಪ್ರಶ್ನಿತ ನಿವೇಶನದಲ್ಲಿ ಉದ್ದೇಶಿಸಿರುವ ವಸತಿ ಉಪಯೋಗದ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು.

25. ಈ ಪ್ರಾಧಿಕಾರದ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಸಂಪರ್ಕ ರಸ್ತೆಯ ಬಗ್ಗೆ ಯಾವುದೇ ತಕರಾರು ಬಂದರೂ ಈ ಪ್ರಾಧಿಕಾರವು ಹೊಣೆಯಲ್ಲ ಮತ್ತು ನೀವೇ ಸ್ವಂತ ಜವಾಬ್ದಾರಿಯಿಂದ ಬಗೆಹರಿಸಿಕೊಳ್ಳತಕ್ಕದ್ದು.

26. ಈ ಅನುಮತಿಯನ್ನು ಉಲ್ಲಂಘಿಸಿ ಅಭಿವೃದ್ಧಿಯನ್ನು ಕೈಗೊಂಡರೆ ಅಥವಾ ನೀಡಿರುವ ಮಾಹಿತಿಗಳು ದೋಷ ಪೂರ್ಣವಾಗಿದ್ದರೆ ಅನುಮತಿಯನ್ನು ಹಿಂತೆಗೆದುಕೊಳ್ಳಲಾಗುವುದಲ್ಲದೇ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು.

27. ಅಂತರಾಷ್ಟ್ರೀಯ ವಾಯು ನೆಲೆಯ ಪರಿಸರದಲ್ಲಿ ಬರುವುದರಿಂದ ಶಬ್ದಮಾಲಿನ್ಯ ಸಹಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

28. ವಸತಿ ಉಪಯೋಗದ ಪರಿಷ್ಕೃತ ಕಟ್ಟಡ ಅನುಮೋದನೆ ಸಂಬಂಧ ಇತರೆ ಇಲಾಖೆಗಳಿಂದ ಅಗತ್ಯವಿರುವ ಅನುಮತಿ/ನಿರಾಕ್ಷೇಪಣಾ ಪತ್ರಗಳನ್ನು ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.

29. ಅರ್ಜಿದಾರರು ಸಲ್ಲಿಸಿರುವ ಮಾಹಿತಿ/ದಾಖಲಾತಿಗಳು ಸುಳ್ಳು ಅಥವಾ ಫೋರ್ಜರಿಗಳಾಗಿದ್ದರೆ ಈ ಕಛೇರಿಯಿಂದ ನೀಡಿರುವ ಪ್ರಾರಂಭಿಕ ಪ್ರಮಾಣ ಪತ್ರವು ತಂತಾನೆ ರದ್ದಾಗುತ್ತದೆ.

02/08/22

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

*ಇವರಿಗೆ:*

**ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು,**
ಅಣ್ಣೇಶ್ವರ ಗ್ರಾಮ ಪಂಚಾಯ್ತಿ,
ದೇವನಹಳ್ಳಿ ತಾಲ್ಲೂಕು,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಕಟ್ಟಡ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

ಪ್ರತಿಯನ್ನು:

1. ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ನಂ. 1/14, 2 ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3 ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು-560027 ಇವರ ಮಾಹಿತಿಗಾಗಿ ಕಳುಹಿಸಿದೆ.
2. ಮೆ॥ ಟ್ರಿನಾಯನಿ ರಿಯಾಲ್ಟರ್ಸ್ ಪ್ರೈವೇಟ್ ಲಿಮಿಟೆಡ್ ಪರವಾಗಿ ಅಧಿಕೃತ ಸಹಿದಾರರಾದ ಶ್ರೀ ಪಿ.ಕೆ.ಮಿಶ್ರ, 4 ನೇ ಮಹಡಿ, ಸಲಾರ್‌ಪುರಿಯಾ ವಿಂಡ್ಸರ್, ನಂ.03, ಹಲಸೂರು ರಸ್ತೆ, ಬೆಂಗಳೂರು-560042 ರವರ ಮಾಹಿತಿಗಾಗಿ.
3. ಕಛೇರಿ ಪ್ರತಿ.